# ಕರ್ನಾಟಕ ಸರ್ಕಾರ

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು

ಸಂಖ್ಯೆ:ಎನ್‌ಆರ್‌ಎಸ್(2)/396/19-20 ದಿನಾಂಕ21.-05-2020

### ಸುತ್ತೋಲೆ

ವಿಷಯ: ಶುಶ್ರೂಷಾಧಿಕಾರಿ ಹುದ್ದೆಯಿಂದ ಹಿರಿಯ ಶುಶ್ರೂಷಾಧಿಕಾರಿ ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ.

ಉಲ್ಲೇಖ: 1. ನಿರ್ದೇಶನಾಲಯದ ಅಂತಿಮ ಜೇಷ್ಠತಾ ಪಟ್ಟಿಯ ಅಧಿಕೃತ ಜ್ಞಾಪನಾ ಪತ್ರ ಸಂ: ಎನ್.ಆರ್.ಎಸ್(2)/133/19-20, ದಿನಾಂಕ: 17.12.2019
2. ನಿರ್ದೇಶನಾಲಯದ ಸುತ್ತೋಲೆ ಪತ್ರದ ದಿನಾಂಕ 03-01-2020.

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಾಧಿಕಾರಿ ಹುದ್ದೆಯಿಂದ ಹಿರಿಯ ಶುಶ್ರೂಷಾಧಿಕಾರಿ ಹುದ್ದೆಗೆ ಪದೋನ್ನತಿ ನೀಡಲು ನೌಕರರ ಅಂತಿಮ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಉಲ್ಲೇಖ (1) ರ ದಿನಾಂಕ: 17.12.2019 ರಲ್ಲಿ ಪ್ರಕಟಿಸಲಾಗಿದೆ.

ಉಲ್ಲೇಖ (2) ರ ನಿರ್ದೇಶನಾಲಯದ ದಿನಾಂಕ: 03-01-2020 ರ ಸುತ್ತೋಲೆ ಪತ್ರದಲ್ಲಿ ಪರಿಷ್ಕೃತ ಜೇಷ್ಠತಾ ಪಟ್ಟಿಯಲ್ಲಿರುವ ಜೇಷ್ಠತಾ ಸಂಖ್ಯೆ 01 ರಿಂದ 1646 ರವರೆಗಿನ ನೌಕರರು ಕಾರ್ಯ ನಿರ್ವಹಣಾ ವರದಿ ಹಾಗೂ ಇತರೆ ದಾಖಲಾತಿಗಳನ್ನು ದಿನಾಂಕ: 16.01.2020 ರೊಳಗಾಗಿ ಸಲ್ಲಿಸುವಂತೆ ಸೂಚಿಸಲಾಗಿತ್ತು. ಸುತ್ತೋಲೆ ಅನುಸಾರ ಅಗತ್ಯ ದಾಖಲಾತಿಗಳನ್ನು ಸಲ್ಲಿಸಿದ್ದು, ಅದರಲ್ಲಿ ಕೆಲವು ನೌಕರರು ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ತಿನ ನೋಂದಣಿ ನವೀಕೃತ ಪ್ರಮಾಣ ಪತ್ರವನ್ನು ಸಲ್ಲಿಸದೆ ಇರುವುದು ಕಂಡುಬಂದಿದ್ದು, ಶುಶ್ರೂಷಾಧಿಕಾರಿ ಹುದ್ದೆಯಿಂದ ಹಿರಿಯ ಶುಶ್ರೂಷಾಧಿಕಾರಿ ಹುದ್ದೆಗೆ ನಡೆಯುವ ಪದೋನ್ನತಿ ಕೌನ್ಸಿಲಿಂಗ್ ದಿನ ತಪ್ಪದೇ ಪದೋನ್ನತಿ ಪಡೆಯುವ ಎಲ್ಲಾ ಶುಶ್ರೂಷಾಧಿಕಾರಿಗಳು ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ತಿನ ನೋಂದಣಿ ನವೀಕೃತ ಪ್ರಮಾಣ ಪತ್ರವನ್ನು ಹಾಜರುಪಡಿಸಲು ಸೂಚಿಸಲಾಗಿದೆ. ಸಲ್ಲಿಸದೇ ಇದ್ದಲ್ಲಿ ಅಂತಹ ನೌಕರರು ಪದೋನ್ನತಿಯಿಂದ ವಂಚಿತರಾಗಿದ್ದೇವೆ ಎಂದು ಪದೋನ್ನತಿ ಪ್ರಕ್ರಿಯೆ ನಂತರ ಸಲ್ಲಿಸುವ ಮನವಿಗಳು ಅಥವಾ ನ್ಯಾಯಾಲಯದ ಮೊರೆ ಹೋಗುವ ಯಾವುದೇ ಅರ್ಜಿಗಳನ್ನು ಪರಿಗಣಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲವೆಂದು ಈ ಮೂಲಕ ತಿಳಿಸಿದೆ.

ನಿರ್ದೇಶಕರು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,
ಬೆಂಗಳೂರು.

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:**

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
2. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರು / ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಗಮನಕ್ಕೆ ತರುವುದೇನೆಂದರೆ, ಅಂತರ್ಜಾಲದಲ್ಲಿ ಪ್ರಕಟಿಸಿರುವ ಸುತ್ತೋಲೆಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಲು ಸೂಚಿಸಿದೆ.
3. ನಿರ್ದೇಶಕರು ಹಾಗೂ ಡೀನ್, ಬೆಂಗಳೂರು/ಮೈಸೂರು/ಮಂಡ್ಯ/ಬಳ್ಳಾರಿ/ಬೆಳಗಾವಿ/ರಾಯಚೂರು/ಹುಬ್ಬಳ್ಳಿ/ಹಾಸನ/ಬೀದರ್/ಇತರೆ ಎಲ್ಲಾ ಸ್ವಾಯುತ್ತ ಸಂಸ್ಥೆಗಳು.............................................. ಜಿಲ್ಲೆ.
4. ವೈದ್ಯಕೀಯ ಅಧೀಕ್ಷಕರು, ಜಯನಗರ/ಸರ್.ಸಿ.ವಿ.ರಾಮನ್ ಸಾರ್ವಜನಿಕ ಆಸ್ಪತ್ರೆ/ಕೆ.ಸಿ.ಜನರಲ್ ಆಸ್ಪತ್ರೆ/...................
5. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ.......................................................ಜಿಲ್ಲೆ
6. ಎಲ್ಲಾ ಪ್ರಾಂಶುಪಾಲರು, ಎ.ಎನ್.ಎಂ ತರಬೇತಿಕೇಂದ್ರ,.............................................. ಜಿಲ್ಲೆ
7. ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು,.......................................................
8. ಎಲ್ಲಾ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ/ ಘಟಕ/ ಸಮುದಾಯ ಆರೋಗ್ಯ ಕೇಂದ್ರ......................
9. ಹಿರಿಯ ಕಾರ್ಯಕ್ರಮಾಧಿಕಾರಿಗಳು, ಗಣಕಯಂತ್ರ ವಿಭಾಗ, ಆಕುಕ ಸೇವೆಗಳು, ಬೆಂಗಳೂರು ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
10. ಆದೇಶ ಪ್ರತಿ/ ಕಛೇರಿ ಪ್ರತಿ.